All India Radio: Bangalore
National Bulletin In Kannada
03.08.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಭಾವನಗರ-ಅಯೋಧ್ಯೆ ಸಾಪ್ತಾಹಿಕ ರೈಲಿಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹಸಿರು ನಿಶಾನೆ
- ಎರಡು ಪ್ರತ್ಯೇಕ ಗುರುತಿನ ಚೀಟಿ ಹೊಂದಿರುವ ಆರೋಪ: ಮೂಲ ಮತದಾರರ ಗುರುತಿನ ಚೀಟಿ ಸಲ್ಲಿಸುವಂತೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್‌ಗೆ ಚುನಾವಣಾ ಆಯೋಗ ಪತ್ರ
- ಐದು ದಿನಗಳ ಅಧಿಕೃತ ಭಾರತ ಭೇಟಿಗಾಗಿ ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಆರ್.ಮಾರ್ಕೋಸ್ ನಾಳೆ ನವದೆಹಲಿಗೆ
- ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್: ಭಾರತದ ವಿರುದ್ಧ ಸರಣಿ ಗೆಲುವಿನತ್ತ ಇಂಗ್ಲೆಂಡ್ ಹೆಜ್ಜೆ

<><><><>

ಗುಜರಾತ್‌ನ ಭಾವನಗರದ ರೈಲು ನಿಲ್ದಾಣದಲ್ಲಿಂದು ಭಾವನಗರ-ಅಯೋಧ್ಯೆ ಸಾಪ್ತಾಹಿಕ ರೈಲಿಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಸಿರು ನಿಶಾನೆ ತೋರಿದರು. ಇದೇ ವೇಳೆ ರೇವಾ-ಪುಣೆ ಹಾಗೂ ಜಬಲ್ಪುರ-ರಾಯ್‌ಪುರ ರೈಲುಗಳಿಗೆ ವರ್ಚುವಲ್ ಮೂಲಕ ಅವರು ಚಾಲನೆ ನೀಡಿದರು. ನಂತರ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಕಳೆದ ೧೧ ವರ್ಷಗಳಲ್ಲಿ ಹೊಸದಾಗಿ ೩೪ ಸಾವಿರ ಕಿಲೋಮೀಟರ್ ರೈಲು ಹಳಿಗಳನ್ನು ಹಾಕಲಾಗಿದೆ. ರೈಲ್ವೆ ಜಾಲವನ್ನು ಅಭಿವೃದ್ಧಿಪಡಿಸುವುದು, ಆಧುನೀಕರಿಸುವುದು ಮತ್ತು ವಿಸ್ತರಿಸುವುದು ಹಾಗೂ ರೈಲ್ವೆಯಲ್ಲಿ ಸುರಕ್ಷತೆ ಮತ್ತು ಶುಚಿತ್ವವನ್ನು ಖಚಿತಪಡಿಸಿಕೊಳ್ಳುವ ಕೇಂದ್ರ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದರು. ದೇಶದಲ್ಲೇ ೧ ಸಾವಿರದ ೩೦೦ ರೈಲ್ವೆ ನಿಲ್ದಾಣಗಳ ಪುನರಾಭಿವೃದ್ಧಿಯು ವಿಶ್ವದಲ್ಲೇ ಇದುವರೆಗಿನ ಅತಿದೊಡ್ಡ ರೈಲು ನಿಲ್ದಾಣ ಪುನರಾಭಿವೃದ್ಧಿ ಯೋಜನೆಯಾಗಿದೆ ಎಂದು ಅವರು ಹೇಳಿದರು.

ಧ್ವನಿ : ಅಶ್ವಿನಿ ವೈಷ್ಣವ್ (೨೮ ಸೆಕೆಂಡ್‌ಗಳು)

ಈ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಮನ್ಸುಖ್ ಮಾಂಡವೀಯ ಮತ್ತು ನಿಮು ಬೆನ್ ಬಂಭಾನಿಯಾ ಉಪಸ್ಥಿತರಿದ್ದರು. ವರ್ಚುವಲ್ ಮೂಲಕ ಈ ಕಾರ್ಯಕ್ರಮದಲ್ಲಿ ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಮತ್ತು ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದಿಯೋ ಸಾಯಿ ಭಾಗವಹಿಸಿದ್ದರು.

<><><><>

ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರು ಎರಡು ಪ್ರತ್ಯೇಕ ಗುರುತಿನ ಚೀಟಿ ಹೊಂದಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ತನಿಖೆಗಾಗಿ ಮೂಲ ಮತದಾರರ ಗುರುತಿನ ಚೀಟಿಯನ್ನು ಸಲ್ಲಿಸುವಂತೆ ಚುನಾವಣಾ ಆಯೋಗವು ತೇಜಸ್ವಿ ಯಾದವ್ ಅವರಿಗೆ ಪತ್ರ ಬರೆದಿದೆ. ಪತ್ರಿಕಾಗೋಷ್ಠಿಯಲ್ಲಿ ನಿನ್ನೆ ತೇಜಸ್ವಿ ಯಾದವ್, ಪ್ರದರ್ಶಿಸಿದ ಮತದಾರರ ಗುರುತಿನ ಚೀಟಿಯನ್ನು ಚುನಾವಣಾ ಆಯೋಗ ನೀಡಿಲ್ಲ ಎಂದು ದಿಘಾ ವಿಧಾನಸಭಾ ಕ್ಷೇತ್ರದ ಚುನಾವಣಾ ನೋಂದಣಿ ಅಧಿಕಾರಿ ಹೇಳಿದ್ದಾರೆ. ಇದೇ ವೇಳೆ ದಿಘಾ ಕ್ಷೇತ್ರದ ಮತದಾರರ ಕರುಡು ಪಟ್ಟಿಯಲ್ಲಿ ತೇಜಸ್ವಿ ಯಾದವ್ ಅವರ ಹೆಸರು ಇದೆ ಎಂದು ಪಾಟ್ನಾ ಜಿಲ್ಲಾ ಚುನಾವಣಾ ಅಧಿಕಾರಿ ಡಾ. ತ್ಯಾಗರಾಜನ್ ದೃಢಪಡಿಸಿದ್ದಾರೆ. ಅಧಿಕೃತ ದಾಖಲೆಗಳ ಪ್ರಕಾರ, ಬಿಹಾರ ಪ್ರಾಣಿ ವಿಜ್ಞಾನ ವಿಶ್ವವಿದ್ಯಾಲಯದ ಗ್ರಂಥಾಲಯ ಕಟ್ಟದಲ್ಲಿರುವ ಬೂತ್ ಸಂಖ್ಯೆ ೨೦೪ ರಲ್ಲಿ ತೇಜಸ್ವಿ ಯಾದವ್ ನೋಂದಾಯಿಸಿಕೊಂಡಿದ್ದಾರೆ. ಚುನಾವಣಾ ಆಯೋಗವು ತೇಜಸ್ವಿ ಯಾದವ್ ಅವರಿಗೆ ಪತ್ರ ಬರೆದಿದ್ದು, ಪರಿಶೀಲನೆಗಾಗಿ ಮೂಲ ಮತದಾರರ ಗುರುತಿನ ಚೀಟಿ ಸಲ್ಲಿಸುವಂತೆ ಕೋರಿದೆ. ಇನ್ನೊಂದೆಡೆ, ಎರಡು ಪ್ರತ್ಯೇಕ ಮತದಾರರ ಗುರುತಿನ ಚೀಟಿ ಹೊಂದುವ ಮೂಲಕ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅಕ್ರಮ ಎಸಗಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ಸಂಬಿತ್ ಪಾತ್ರ, ಈ ಮೂಲಕ ತೇಜಸ್ವಿ ಯಾದವ್, ಚುನಾವಣಾ ಆಯೋಗಕ್ಕೆ ತಪ್ಪು ಸಂಗತಿಗಳನ್ನು ಪ್ರಸ್ತುತ ಪಡಿಸಿದ್ದಾರೆಯೇ ಎಂದು ಪ್ರಶ್ನಿಸಿದರು. ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ೨೦೨೦ರ ತಮ್ಮ ಚುನಾವಣಾ ಅಫಿಡೆವಿಟ್‌ನಲ್ಲಿ ಸಲ್ಲಿಸಿದ ಮತದಾರರ ಗುರುತಿನ ಚೀಟಿ ಮತ್ತು ವಿಶೇಷ ತೀವ್ರ ಪರಿಷ್ಕರಣೆ ನಂತರ ಮತದಾರರ ಪಟ್ಟಿಯಿಂದ ತಮ್ಮ ಹೆಸರು ಕಾಣೆಯಾಗಿದೆ ಎಂದು ಅವರು ಪ್ರಸ್ತುತಪಡಿಸಿದ ಗುರುತಿನ ಚೀಟಿ ಎರಡು ಭಿನ್ನವಾಗಿದೆ ಎಂದು ಅವರು ಆರೋಪಿಸಿದರು.

ಚುನಾವಣಾ ಆಯೋಗದಂತಹ ಸಾಂವಿಧಾನಿಕ ಸಂಸ್ಥೆಗಳನ್ನು ದುರ್ಬಲಗೊಳಿಸಲು ಮತ್ತು ಅವಮಾನಿಸಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಅವರ ಮಿತ್ರ ತೇಜಸ್ವಿ ಯಾದವ್ ಸುಳ್ಳುಗಳನ್ನು ಬಳಸುತ್ತಿದ್ದಾರೆ ಎಂದು ಸಂಬಿತ್ ಪಾತ್ರ ದೂರಿದ್ದಾರೆ.

<><><><>

ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಎಫ್‌ಎಸ್‌ಎಸ್‌ಎಐ, 'ಆಯುರ್ವೇದ ಆಹಾರ' ವರ್ಗದಡಿಯಲ್ಲಿ ಆಯುರ್ವೇದ ಆಹಾರ ಸಿದ್ಧತೆಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ನಿಯಮಗಳು ಆಯುರ್ವೇದ ಪಠ್ಯಗಳಿಂದ ಪಾಕ ವಿಧಾನಗಳು, ಪದಾರ್ಥಗಳು ಮತ್ತು ಪ್ರಕ್ರಿಯೆಗಳನ್ನು ಆಧರಿಸಿದ ಆಹಾರಗಳನ್ನು ಗುರುತಿಸುತ್ತವೆ. ನೂತನ ಪಟ್ಟಿಯು ಗ್ರಾಹಕರ ಮತ್ತು ಉದ್ಯಮಗಳಿಗೆ ಸ್ಪಷ್ಟತೆ ಮತ್ತು ವಿಶ್ವಾಸವನ್ನು ತರುತ್ತದೆ. ನಾಗರಿಕರನ್ನು ಆಯುರ್ವೇದ ಆಹಾರದ ದೀರ್ಘಕಾಲಿನ ಆರೋಗ್ಯ ಪ್ರಯೋಜನಗಳನ್ನು ಅನುಭವಿಸಲು ತಮ್ಮ ದೈನಂದಿನ ಜೀವನದಲ್ಲಿ ಇದನ್ನು ಅಳವಡಿಸಿಕೊಳ್ಳಬೇಕು ಎಂದು ಆಯುಷ್ ಸಚಿವಾಲಯದ ರಾಜ್ಯ ಸಚಿವ ಪ್ರತಾಪ್ ರಾವ್ ಜಾಧವ್ ಸಲಹೆ ನೀಡಿದರು. ಈ ಪರೀಕ್ಷಿತ ಆಹಾರ ಪದ್ಧತಿಗಳು ದೇಹವನ್ನು ಪೋಷಿಸುವುದಲ್ಲದೇ ರೋಗ ನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ. ಜೀರ್ಣಕ್ರಿಯೆಯನ್ನು ಬೆಂಬಲಿಸುತ್ತದೆ ಮತ್ತು ಒಟ್ಟಾರೆ ಉತ್ತಮ ಆರೋಗ್ಯವನ್ನು ಉತ್ತೇಜಿಸುತ್ತದೆ ಎಂದು ಅವರು ಹೇಳಿದರು.

<><><><>

ದೀನ್ ದಯಾಳ್ ಬಂದರು ಪ್ರಾಧಿಕಾರವು ಗುಜರಾತ್‌ನ ಕಾಂಡ್ಲಾದ ಬಂದರು ವಲಯದಲ್ಲಿ ಭಾರತದ ಮೊದಲ ಮೇಕ್ ಇನ್ ಇಂಡಿಯಾ ಹಸಿರು ಹೈಡ್ರೋಜನ್ ಸ್ಥಾವರವನ್ನು ಕಾರ್ಯಾರಂಭ ಮಾಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನಿವ್ವಳ ಶೂನ್ಯ ದೃಷ್ಟಿಕೋನದತ್ತ ಇದು ಪ್ರಬಲ ಹೆಜ್ಜೆಯಾಗಿದೆ ಎಂದು ದೀನ್ ದಯಾಳ್ ಬಂದರು ಪ್ರಾಧಿಕಾರ ಹೇಳಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ಇದು ಸುಸ್ಥಿರತೆಯನ್ನು ಪ್ರತಿಪಾದಿಸುವ ಮತ್ತು ನಿವ್ವಳ ಶೂನ್ಯ ದೃಷ್ಟಿಕೋನಕ್ಕೆ ಶಕ್ತಿ ತುಂಬುವ ಶ್ಲಾಘನೀಯ ಪ್ರಯತ್ನವಾಗಿದೆ ಎಂದು ಹೇಳಿದ್ದಾರೆ.

<><><><>

ಫಿಲಿಪ್ಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಆರ್.ಮಾರ್ಕೋಸ್ ಅವರು ಐದು ದಿನಗಳ ಅಧಿಕೃತ ಭಾರತ ಭೇಟಿಗಾಗಿ ನಾಳೆ ನವದೆಹಲಿಗೆ ಆಗಮಿಸಲಿದ್ದಾರೆ. ಅವರೊಂದಿಗೆ ಪತ್ನಿ ಲೂಯಿಸ್ ಅರನೇಟಾ ಮಾರ್ಕೋಸ್, ಸಚಿವ ಸಂಪುಟದ ಸಚಿವರನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗ ಆಗಮಿಸಲಿದೆ. ಫಿಲಿಪ್ಪೈನ್ಸ್ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಭಾರತಕ್ಕೆ ಮಾರ್ಕೋಸ್ ಅವರ ಮೊದಲ ಭೇಟಿ ಇದಾಗಿದೆ. ಭೇಟಿಯ ಸಂದರ್ಭದಲ್ಲಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಹಾಗೂ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಅವರನ್ನು ಭೇಟಿಯಾಗಲಿದ್ದು, ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಭಾರತ ಮತ್ತು ಫಿಲಿಪ್ಪೈನ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳು ೧೯೪೯ರ ನವೆಂಬರ್‌ನಲ್ಲಿ ಸ್ಥಾಪನೆಯಾಯಿತು. ಅಂದಿನಿಂದ ಉಭಯ ದೇಶಗಳು ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ ಮತ್ತು ಭದ್ರತೆ, ಕಡಲ ಸಹಕಾರ, ಕೃಷಿ, ಆರೋಗ್ಯ ರಕ್ಷಣೆ, ಔಷಧಗಳು, ಡಿಜಿಟಲ್ ತಂತ್ರಜ್ಞಾನ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳಲ್ಲಿ ಬಲವಾದ ಪಾಲುದಾರಿಕೆ ಹೊಂದಿವೆ.

<><><><>

ಉತ್ತರ ಪ್ರದೇಶದ ಗೊಂಡಾದಲ್ಲಿ ಇಂದು ನಡೆದ ರಸ್ತೆ ಅಪಘಾತದಲ್ಲಿ ಕನಿಷ್ಠ ೧೧ ಜನರು ಮೃತಪಟ್ಟಿದ್ದು, ಇತರೆ ನಾಲ್ವರು ಗಾಯಗೊಂಡಿದ್ದಾರೆ. ಹದಿನೈದು ಮಂದಿ ಭಕ್ತರು ಬೊಲೆರೊ ವಾಹನದಲ್ಲಿ ಪೃಥ್ವಿನಾಥ ದೇವಸ್ಥಾನಕ್ಕೆ ತೆರಳುತ್ತಿದ್ದರು. ಈ ವೇಳೆ ವಾಹನ ನಿಯಂತ್ರಣ ತಪ್ಪಿ ರೆಹರಾ ಗ್ರಾಮದ ಸರಯೂ ನದಿಯ ಕಾಲುವೆಗೆ ಬಿದ್ದಿದೆ. ಕಾಲುವೆಯಿಂದ ೧೧ ಶವಗಳನ್ನು ಹೊರಕ್ಕೆ ತೆಗೆಯಲಾಗಿದೆ. ನಾಲ್ವರು ಪ್ರಯಾಣಿಕರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಅಪಘಾತದಲ್ಲಿ ಮೃತಪಟ್ಟ ಕುಟುಂಬಗಳಿಗೆ ಪ್ರಧಾನಿ ನರೇಂದ್ರ ಮೋದಿ, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸಂತಾಪ ಸೂಚಿಸಿದ್ದಾರೆ. ಇದೇ ವೇಳೆ ಪ್ರಧಾನ ಮಂತ್ರಿಗಳ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ ಮೃತ ಕುಟುಂಬಗಳಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರವನ್ನು ಪ್ರಧಾನಿ ಘೋಷಿಸಿದ್ದಾರೆ. ಅಲ್ಲದೇ ಉತ್ತರ ಪ್ರದೇಶ ಸರ್ಕಾರ ಮೃತ ಕುಟುಂಬಗಳಿಗೆ ತಲಾ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದೆ.

<><><><>

ಆಂಧ್ರ ಪ್ರದೇಶದ ಬಪಟ್ಲಾ ಜಿಲ್ಲೆಯ ಬಲ್ಲಿಕುರವದಲ್ಲಿ ಇಂದು ಗ್ರಾನೈಟ್ ಕ್ವಾರಿಯಲ್ಲಿ ಸಂಭವಿಸಿದ ಅಪಘಾತದಲ್ಲಿ ೬ ವಲಸೆ ಕಾರ್ಮಿಕರು ಸಾವನಪ್ಪಿದ್ದು, ಮೂವರು ಗಾಯಗೊಂಡಿದ್ದಾರೆ. ಗಣಿಗಾರಿಕೆ ಕೆಲಸದಲ್ಲಿ ತೊಡಗಿದ್ದ ಕಾರ್ಮಿಕರ ಮೇಲೆ ಬೃಹತ್ ಗ್ರಾನೈಟ್ ಬಂಡೆ ಉರುಳಿ ಬಿದ್ದಿದೆ. ಗಾಯಾಳುಗಳನ್ನು ನರಸಾರಾವ್ ಪೇಟೆಯ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆಯ ಸಮಯದಲ್ಲಿ ಕನಿಷ್ಠ ೧೬ ಕಾರ್ಮಿಕರು ಕ್ವಾರಿಯಲ್ಲಿದ್ದರು. ಮೃತಪಟ್ಟ ಎಲ್ಲ ಕಾರ್ಮಿಕರು ಒಡಿಶಾದವರಾಗಿದ್ದಾರೆ. ಘಟನೆಯಲ್ಲಿ ಮೃತ ಕುಟುಂಬಗಳಿಗೆ ಆಂಧ್ರ ಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಸಂತಾಪ ಸೂಚಿಸಿದ್ದು, ಗಂಭೀರವಾಗಿ ಗಾಯಗೊಂಡವರಿಗೆ ತಕ್ಷಣ ವೈದ್ಯಕೀಯ ನೆರವು ಒದಗಿಸುವಂತೆ ಆದೇಶಿಸಿದ್ದಾರೆ.

<><><><>

ಲಂಡನ್‌ನ ಓವಲ್‌ನಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ಸರಣಿಯ ಅಂತಿಮ ಪಂದ್ಯದ ೪ನೇ ದಿನದಾಟದಲ್ಲಿಂದು ತನ್ನ ೨ನೇ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ಇತ್ತೀಚಿನ ವರದಿ ಬಂದಾಗ ೩ ವಿಕೆಟ್ ನಷ್ಟಕ್ಕೆ ೨೩೯ ರನ್ ಮಾಡಿ ಆಡುತ್ತಿದೆ. ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೨೪ ರನ್ ಗಳಿಸಿದ್ದು, ೨ನೇ ಇನ್ನಿಂಗ್ಸ್‌ನಲ್ಲಿ ೩೯೬ ರನ್ ಗಳಿಸಿದೆ. ಇಂಗ್ಲೆಂಡ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೪೭ ರನ್ ಮಾಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>